**All India Radio: Bangalore**
**National Bulletin In Kannada**
**24.02.2026  1.10 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**24.02.2026  1.10  pm**

**<>><><*><><<>**

ಮುಖ್ಯಾಂಶಗಳು

**೧.   ದೋಷರಹಿತ ಮತದಾರರ ಪಟ್ಟಿಯೇ ಪ್ರಜಾಪ್ರಭುತ್ವದ ಅಡಿಪಾಯ ; ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್**

**೨.   ಅಮೆರಿಕ-ಭಾರತ ಕಾರ್ಯತಂತ್ರ ಪಾಲುದಾರಿಕೆ ವೇದಿಕೆ ; ಪ್ರವಾಸೋದ್ಯಮ ನಾಯಕತ್ವ ಶೃಂಗಸಭೆಗೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಚಾಲನೆ**

**೩.   ಭಾರತ ಎಐ-ಇಂಪ್ಯಾಕ್ಟ್ ಶೃಂಗಸಭೆ ವೇಳೆ ಕಾಂಗ್ರೆಸ್ ಪ್ರತಿಭಟನೆ ಪ್ರಕರಣ ; ಭಾರತೀಯ ಯುವ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷರ ಬಂಧನ**

**೪.   ಮಹಿಳಾ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್ ಸರಣಿ ; ಮೊದಲನೇ ಪಂದ್ಯದಲ್ಲಿ ಆಸ್ಟ್ರೇಲಿಯಾಗೆ ೨೧೫ ರನ್‌ಗಳ ಗುರಿ ನೀಡಿದ ಭಾರತ**

**<>><><*><><<>**

ಮತದಾರರ ದೋಷರಹಿತ ಪಟ್ಟಿ ಯಾವುದೇ ಪ್ರಜಾಪ್ರಭುತ್ವದ ಅಡಿಪಾಯವಾಗಿದೆ ಎಂದು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಡೆಯುತ್ತಿರುವ ಭಾರತೀಯ ಚುನಾವಣಾ ಆಯೋಗ ಮತ್ತು ರಾಜ್ಯ ಚುನಾವಣಾ ಆಯುಕ್ತರ ರಾಷ್ಟ್ರೀಯ ದುಂಡುಮೇಜಿನ ಸಮ್ಮೇಳನದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಿಶೇಷ ತೀವ್ರ ಪರಿಷ್ಕರಣೆ-ಎಸ್‌ಐಆರ್ ಕುರಿತು ಪ್ರಸ್ತಾಪಿಸಿದ ಅವರು, ಅರ್ಹ ಮತದಾರರೆಲ್ಲರೂ ಪಟ್ಟಿಯಲ್ಲಿರಬೇಕು ಮತ್ತು ಅನರ್ಹರನ್ನು ಪಟ್ಟಿಯಿಂದ ಹೊರಗಿಡಬೇಕು ಎಂದು ಪ್ರತಿಪಾದಿಸಿದರು. ಬಿಹಾರ ರಾಜ್ಯದಿಂದ ಆರಂಭವಾದ ಈ ವಿಶೇಷ ತೀವ್ರ ಪರಿಷ್ಕರಣಾ ಪ್ರಕ್ರಿಯೆ ಯಾವುದೇ ಮೇಲ್ಮನವಿಗಳಿಲ್ಲದೇ ಅತ್ಯಂತ ದೋಷರಹಿತವಾಗಿ ಪೂರ್ಣಗೊಂಡಿದೆ ಎಂದು ಹರ್ಷ ವ್ಯಕ್ತಪಡಿಸಿದರು. ಇದೇ ವೇಳೆ ಅವರು, ಮತದಾರರ ಪಟ್ಟಿಯನ್ನು ಶುದ್ಧಗೊಳಿಸಿ ಸರಳಗೊಳಿಸುವುದರ ಜೊತೆಗೆ ಮತದಾರರಿಗೆ ಸುಲಭವಾಗಿ ಲಭ್ಯವಾಗುವಂತೆ ಮಾಡುವುದು ಅತ್ಯಗತ್ಯ ಎಂದರು.  ದಿನವಿಡೀ ನಡೆಯುವ ಸಮ್ಮೇಳನದಲ್ಲಿ, ಚುನಾವಣಾ ಪ್ರಕ್ರಿಯೆಗಳನ್ನು ಬಲಪಡಿಸುವುದರೊಂದಿಗೆ ತಂತ್ರಜ್ಞಾನ, ಇವಿಎಂಗಳು ಮತ್ತು ಮತದಾರರ ಪಟ್ಟಿಗಳ ಮೇಲೆ

ಚರ್ಚೆಗಳು ಕೇಂದ್ರೀಕರಿಸಲಿವೆ. ಆಯೋಗದ ಹಿರಿಯ ಅಧಿಕಾರಿಗಳು ಇತ್ತೀಚೆಗೆ ಪ್ರಾರಂಭಿಸಲಾದ ಇಸಿಐ ನೆಟ್ ಡಿಜಿಟಲ್ ವೇದಿಕೆ ಮತ್ತು ಚುನಾವಣಾ ಸೇವೆಗಳನ್ನು ಸುಗಮಗೊಳಿಸುವಲ್ಲಿ ಅದರ ಪರಿವರ್ತನಾ ಸಾಮರ್ಥ್ಯ ಸೇರಿದಂತೆ ಪ್ರಮುಖ ತಾಂತ್ರಿಕ ಹಾಗೂ ಕಾರ್ಯಾಚರಣೆಯ ಉಪಕ್ರಮಗಳ ಕುರಿತು ಪ್ರಸ್ತುತಿಗಳನ್ನು ನೀಡಲಿದ್ದಾರೆ.

**<>><><*><><<>**

ಪ್ರವಾಸೋದ್ಯಮವು ಕೇವಲ ಒಂದು ಉದ್ಯಮವಲ್ಲ, ಅದು ಸಂಸ್ಕೃತಿಗಳ ನಡುವಿನ ಸೇತುವೆ ಮತ್ತು ಆರ್ಥಿಕ ಅವಕಾಶಗಳ ಚಾಲಕ ಶಕ್ತಿಯಾಗಿದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ 'ಅಮೆರಿಕ-ಭಾರತ ಕಾರ್ಯತಂತ್ರ ಪಾಲುದಾರಿಕೆ ವೇದಿಕೆ ಪ್ರವಾಸೋದ್ಯಮ ನಾಯಕತ್ವ ಶೃಂಗಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರವಾಸೋದ್ಯಮವು ಮೃದು ರಾಜತಾಂತ್ರಿಕತೆಯ ಪ್ರಬಲ ಸಾಧನವಾಗಿದೆ. ಇಂದಿನ ಕಾಲಘಟ್ಟದಲ್ಲಿ ಪ್ರವಾಸಿಗರು ಅನುಭವಗಳು, ವಿಶ್ವಾಸಾರ್ಹತೆ, ಸುಸ್ಥಿರತೆ, ಸಂಸ್ಕೃತಿ, ಪರಂಪರೆ, ಆರೋಗ್ಯ ಮತ್ತು ಅರ್ಥಪೂರ್ಣ ಸಂಬಂಧಗಳನ್ನು ಬಯಸುತ್ತಾರೆ ಎಂದು ತಿಳಿಸಿದರು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಪ್ರವಾಸೋದ್ಯಮವು ಸಂಸ್ಕೃತಿ ಮತ್ತು ಮಾನವ ಆಕಾಂಕ್ಷೆಗಳ ಆಚರಣೆಯಾಗಿದೆ. ಜಾಗತಿಕ ಪ್ರಬಲ ಆರ್ಥಿಕತೆಯಾಗಿ ಹೊರಹೊಮ್ಮುತ್ತಿರುವ ಭಾರತದ ಅಭಿವೃದ್ಧಿಯ ದೂರದೃಷ್ಟಿಯಲ್ಲಿ ಪ್ರವಾಸೋದ್ಯಮ ಪ್ರಮುಖ ಸ್ಥಾನ ಪಡೆದಿದೆ. ಅದು ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ವ್ಯಾಪಕ ಜೀವನೋಪಾಯ ಸೃಷ್ಟಿಸುತ್ತಿದೆ. ಕಳೆದ ಒಂದು ವರ್ಷದಲ್ಲಿ ಅಮೆರಿಕದಿಂದ ಸುಮಾರು ೧.೮ ದಶಲಕ್ಷ ಪ್ರವಾಸಿಗರು ಭಾರತಕ್ಕೆ ಭೇಟಿ ನೀಡಿರುವುದು ಪ್ರವಾಸೋದ್ಯಮ ಯಶಸ್ಸಿಗೆ ಸಾಕ್ಷಿಯಾಗಿದೆ ಎಂದರು.

**<>><><*><><<>**

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ನಾಲ್ಕು ದಿನಗಳ ಕಾಲ ಮಹಾರಾಷ್ಟ್ರ, ಜಾರ್ಖಂಡ್ ಮತ್ತು ರಾಜಸ್ಥಾನಕ್ಕೆ ಭೇಟಿ ನೀಡಲಿದ್ದಾರೆ. ಇಂದು ಪಿಡಿ ಹಿಂದೂಜಾ ಆಸ್ಪತ್ರೆಯು ಮುಂಬೈನ ಲೋಕ ಭವನದಲ್ಲಿ ಆಯೋಜಿಸಿರುವ 'ಜೀವಗಳ ರಕ್ಷಣೆ ಮತ್ತು ಆರೋಗ್ಯಕರ ಭಾರತವನ್ನು ನಿರ್ಮಿಸುವುದು' ಎಂಬ ರಾಷ್ಟ್ರವ್ಯಾಪಿ ಅಭಿಯಾನವನ್ನು ರಾಷ್ಟ್ರಪತಿ ಅವರು ಉದ್ಘಾಟಿಸಲಿದ್ದಾರೆ. ನಾಳೆ ಬುಲ್ಧಾನಾದ ಶೇಗಾಂವ್‌ನಲ್ಲಿ ಕೇಂದ್ರ ಆಯುಷ್ ಸಚಿವಾಲಯ ಆಯೋಜಿಸಿರುವ 'ರಾಷ್ಟ್ರೀಯ ಆರೋಗ್ಯ ಮೇಳ ೨೦೨೬ರಲ್ಲಿ ಅವರು ಭಾಗವಹಿಸಲಿದ್ದಾರೆ. ನಾಡಿದ್ದು ನಾಗ್ಪುರದಲ್ಲಿ ಬ್ರಹ್ಮ ಕುಮಾರಿಯರು ಆಯೋಜಿಸಿರುವ 'ಏಕತೆ ಮತ್ತು ವಿಶ್ವಾಸದ ಮೂಲಕ ಮಹಾರಾಷ್ಟ್ರದ

ಸುವರ್ಣ ಯುಗ' ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಇದೇ ೨೬ ರಂದು, ಜಾರ್ಖಂಡ್‌ನ ಜೆಮ್ಶೆಡ್‌ಪುರದ ಶ್ರೀ ಜಗನಾಥ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ದತ್ತಿ ಕೇಂದ್ರ ಟ್ರಸ್ಟ್ ಆಯೋಜಿಸಿರುವ ಶ್ರೀ ಜಗನ್ನಾಥ ದೇವಾಲಯದ ಭೂಮಿ ಪೂಜೆ ಸಮಾರಂಭದಲ್ಲಿ ಭಾಗವಹಿಸುವರು. ನಂತರ ಅವರು ಜೆಮ್ಶೆಡ್‌ಪುರದ ಮಣಿಪಾಲ್ ಟಾಟಾ ವೈದ್ಯಕೀಯ ಕಾಲೇಜಿಗೆ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದಾರೆ.

<><><*><><<>

ಭಾರತ ಎಐ-ಇಂಪ್ಯಾಕ್ಟ್ ಶೃಂಗಸಭೆಯ ಅಂತಿಮ ದಿನದಂದು ಅಂಗಿ ಕಳಚಿ ನಡೆಸಿದ ಪ್ರತಿಭಟನೆಗೆ ಸಂಬಂಧಿಸಿದಂತೆ ದೆಹಲಿ ಪೊಲೀಸರು ಇಂದು ಭಾರತೀಯ ಯುವ ಕಾಂಗ್ರೆಸ್ ಐವೈಸಿಯ ರಾಷ್ಟ್ರೀಯ ಅಧ್ಯಕ್ಷ ಉದಯ್ ಭಾನು ಚಿಬ್ ಅವರನ್ನು ಬಂಧಿಸಿದ್ದಾರೆ. ಪ್ರತಿಭಟನೆ ಕುರಿತು ಹಲವು ಸುತ್ತಿನ ವಿಚಾರಣೆ ನಂತರ ಇಂದು ಮುಂಜಾನೆ ಉದಯ್ ಭಾನು ಅವರನ್ನು ವಶಕ್ಕೆ ಪಡೆಯಲಾಯಿತು. ಶೃಂಗಸಭೆ ಸಮಯದಲ್ಲಿ ನಡೆದ ಪ್ರತಿಭಟನೆಯು ಜಾಗತಿಕ ವೇದಿಕೆಯಲ್ಲಿ ಭಾರತದ ವರ್ಚಸ್ಸಿಗೆ ಧಕ್ಕೆ ತರಲು ಪ್ರಯತ್ನ ಎಂದು ಬಿಜೆಪಿ ಟೀಕಿಸಿದೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿರುವ ಬಿಜೆಪಿ ವಕ್ತಾರ ಶಾಜಾದ್ ಪುನವಾಲಾ, ಶೃಂಗಸಭೆಯ ವೇಳೆ ಕಾಂಗ್ರೆಸ್‌ನ ವರ್ತನೆಯನ್ನು ಅವರ ಪಕ್ಷದ ನಾಯಕರು ಮತ್ತು ಮೈತ್ರಿಕೂಟದ ಪಾಲುದಾರರೇ ಬೆಂಬಲಿಸುತ್ತಿಲ್ಲ ಎಂದು ಟೀಕಿಸಿದ್ದಾರೆ. ಈ ಘಟನೆ ಆಳವಾದ ಪಿತೂರಿಯಾಗಿದೆ. ಇದು ಅಂತಾರಾಷ್ಟ್ರೀಯ ವೇದಿಕೆಯಲ್ಲಿ ದೇಶದ ಘನತೆಗೆ ಧಕ್ಕೆ ತರುವ ಪ್ರಯತ್ನವಾಗಿದೆ ಎಂದಿದ್ದಾರೆ. ಮತ್ತೊಂದೆಡೆ ಉದಯ್ ಭಾನು ಚಿಬ್ ಅವರ ಬಂಧನವನ್ನು ಹಿರಿಯ ಕಾಂಗ್ರೆಸ್ ನಾಯಕ ಭೂಪೇಶ್ ಬಘೇಲ್ ತೀವ್ರವಾಗಿ ಖಂಡಿಸಿದ್ದಾರೆ. ಪ್ರಜಾ ಪ್ರಭುತ್ವದಲ್ಲಿ ಶಾಂತಿಯುತವಾಗಿ ಧ್ವನಿ ಎತ್ತುವುದು ಅಪರಾಧವಲ್ಲ ಎಂದಿರುವ ಅವರು, ಬಂಧಿತರ ತ್ವರಿತ ಬಿಡುಗಡೆಗೆ ಆಗ್ರಹಿಸಿದ್ದಾರೆ. ಕಾಂಗ್ರೆಸ್ ನಾಯಕ ಪವನ್ ಖೇರಾ ಪ್ರತಿಭಟನೆಯನ್ನು ಸಮರ್ಥಿಸಿಕೊಂಡಿದ್ದು, ಶಾಂತಿಯುತ ಮಾರ್ಗ ಅನುಸರಿಸಲಾಗಿದೆ ಎಂದಿದ್ದಾರೆ.

<><><*><><<>

ತಮಿಳುನಾಡು ಮಾಜಿ ಮುಖ್ಯಮಂತ್ರಿ ಜಯಲಲಿತಾ ಜನ್ಮದಿನದಂದು ಅವರಿಗೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್ ಸೇರಿದಂತೆ ಗಣ್ಯರು ಗೌರವ ನಮನ ಸಲ್ಲಿಸಿದ್ದಾರೆ. ಜಯಲಲಿತಾ ಅವರು ಒಬ್ಬ ವರ್ಚಸ್ವಿ ನಾಯಕಿಯಾಗಿ, ಅತ್ಯುತ್ತಮ ಆಡಳಿತಗಾರ್ತಿಯಾಗಿ ಅಸಂಖ್ಯಾತ ಜನರ ಹೃದಯ ಮತ್ತು ಮನಸ್ಸಿನಲ್ಲಿ ಸ್ಥಾನ ಪಡೆದಿದ್ದಾರೆ,

ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಅವರ ಜೀವನದ ಪಯಣ ಅಪಾರ ಛಲ ಮತ್ತು ದೃಢಸಂಕಲ್ಪದಿಂದ ಕೂಡಿದ್ದಾಗಿತ್ತು. ತಮಿಳುನಾಡಿನ ಮುಖ್ಯಮಂತ್ರಿಯಾಗಿ ಅವರು ಮಹಿಳಾ ಸಬಲೀಕರಣ, ಸಾಮಾಜಿಕ ನ್ಯಾಯ ಮತ್ತು ಒಳಗೊಳ್ಳುವ ಅಭಿವೃದ್ಧಿಯ ಮೇಲೆ ಹೆಚ್ಚಿನ ಗಮನಹರಿಸಿ, ಕಲ್ಯಾಣ ಆಧಾರಿತ ಆಡಳಿತವನ್ನು ಮುನ್ನಡೆಸಿದ್ದರು ಎಂಬುದಾಗಿ ಪ್ರಧಾನಿ ಸ್ಮರಿಸಿದ್ದಾರೆ.

**<>><><*><><<>**

ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಇಂದು ಎಸ್ಟೋನಿಯಾದ ವಿದೇಶಾಂಗ ಸಚಿವ ಮಾರ್ಗಸ್ ಸಾಕ್ನಾ ಅವರಿಗೆ ಹಾಗೂ ಅಲ್ಲಿನ ನಾಗರಿಕರಿಗೆ ಸ್ವಾತಂತ್ರ್ಯ ದಿನಾಚರಣೆಯ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಅವರು, ಉಭಯ ದೇಶಗಳ ನಡುವಿನ ಸೌಹಾರ್ದಯುತ ಸಂಬಂಧವನ್ನು ಮತ್ತಷ್ಟು ಬಲಪಡಿಸುವ ಬದ್ಧತೆಯನ್ನು ಪುನರುಚ್ಚರಿಸಿದ್ದಾರೆ.

**<>><><*><><<>**

ಗಲ್ಫ್ ಸಹಕಾರ ಮಂಡಳಿ-ಜಿಸಿಸಿಯ ಪ್ರಧಾನ ಕಾರ್ಯದರ್ಶಿ ಜಾಸೆಮ್ ಮೊಹಮ್ಮದ್ ಅಲ್ ಬುದೈವಿ, ಇಂದು ಬೆಳಿಗ್ಗೆ ನವದೆಹಲಿಗೆ ಆಗಮಿಸಿದ್ದಾರೆ. ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಅವರು ಈ ಭೇಟಿಯು ಭಾರತ ಮತ್ತು ಜಿ.ಸಿ.ಸಿ ನಡುವಿನ ಐತಿಹಾಸಿಕ ಸಂಬಂಧಗಳನ್ನು ಮತ್ತಷ್ಟು ಬಲಪಡಿಸಲಿದೆ ಎಂದು ಸಾಮಾಜಿಕ ಮಾಧ್ಯಮದ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

**<>><><*><><<>**

ಪ್ರಸಕ್ತ ಹಣಕಾಸು ವರ್ಷದ ಮೂರನೇ ತ್ರೈಮಾಸಿಕದಲ್ಲಿ ದೇಶದ ಆರ್ಥಿಕತೆಯು ಶೇಕಡ ೮.೧ರಷ್ಟು ಬೆಳವಣಿಗೆ ಕಂಡಿದೆ ಎಂದು ಅಂದಾಜಿಸಲಾಗಿದೆ. ಭಾರತೀಯ ಸ್ಟೇಟ್ ಬ್ಯಾಂಕ್ ಇಂದು ಬಿಡುಗಡೆ ಮಾಡಿರುವ ಸಂಶೋಧನಾ ವರದಿಯಲ್ಲಿ ಇದನ್ನು ಉಲ್ಲೇಖಿಸಲಾಗಿದೆ. ವರದಿಯ ಪ್ರಕಾರ, ೨೦೨೫ರ ಡಿಸೆಂಬರ್ ೩೧ಕ್ಕೆ ಕೊನೆಗೊಂಡ ತ್ರೈಮಾಸಿಕದಲ್ಲಿ, ಆರ್ಥಿಕ ಚಟುವಟಿಕೆಗಳು ಚೇತರಿಸಿಕೊಳ್ಳುತ್ತಿದೆ ಎಂದು ಸೂಚಕಗಳು ತಿಳಿಸುತ್ತಿವೆ. ಜಾಗತಿಕ ಸವಾಲುಗಳ ಹೊರತಾಗಿಯೂ, ಆರ್ಥಿಕತೆಯು ಬೆಳವಣಿಗೆಯ ವೇಗವನ್ನು ಕಾಯ್ದುಕೊಂಡಿದೆ.

**<>><><*><><<>**

ನೆದರ್‌ಲ್ಯಾಂಡ್ಸ್ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ರಾಬ್ ಯೆತ್ತನ್ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ ಸಲ್ಲಿಸಿದ್ದಾರೆ. ಸಾಮಾಜಿಕ ಜಾಲತಾಣ ಪೋಸ್ಟ್‌ನಲ್ಲಿ ಅವರು,

ಭಾರತ ಮತ್ತು ನೆದರ್‌ಲ್ಯಾಂಡ್ಸ್ ವಿವಿಧ ಕ್ಷೇತ್ರಗಳಲ್ಲಿ ಬಲವಾದ ಸಂಬಂಧಗಳನ್ನು ಹಂಚಿಕೊಂಡಿವೆ. ಉಭಯ ರಾಷ್ಟ್ರಗಳು ಮತ್ತು ಜನರ ನಡುವಿನ ಬೆಳೆಯುತ್ತಿರುವ ಬಾಂಧವ್ಯಕ್ಕೆ ಮತ್ತಷ್ಟು ವೇಗ ನೀಡಲು ನಿಕಟವಾಗಿ ಕೆಲಸ ಮಾಡಲು ಎದುರು ನೋಡುತ್ತಿರುವುದಾಗಿ ತಿಳಿಸಿದ್ದಾರೆ.

**<>><><*><><<>**

ಆಸ್ಟ್ರೇಲಿಯಾದ ಬ್ರಿಜ್ಬೆನ್‌ನಲ್ಲಿ ನಡೆಯುತ್ತಿರುವ ಭಾರತ ಹಾಗೂ ಆಸ್ಟ್ರೇಲಿಯಾ ವನಿತಾ ತಂಡಗಳ ನಡುವಿನ ಮೂರು ಪಂದ್ಯಗಳ ಮಹಿಳಾ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್ ಸರಣಿಯ ಮೊದಲನೇ ಪಂದ್ಯದಲ್ಲಿ ಭಾರತದ ಮಹಿಳಾ ತಂಡ ಆಸ್ಟ್ರೇಲಯಾ ತಂಡಕ್ಕೆ ೨೧೫ ರನ್‌ಗಳ ಗುರಿ ನೀಡಿದೆ. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಭಾರತ ೪೮.೩ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೨೧೪ ರನ್ ಗಳಿಸಿತು.

**<>><><*><><<>**

ಕರ್ನಾಟಕದ ಹುಬ್ಬಳ್ಳಿಯ ಕೆಎಸಿಎ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಪ್ರಸಕ್ತ ಸಾಲಿನ ರಣಜಿ ಟ್ರೋಫಿಯ ಫೈನಲ್ ಪಂದ್ಯದಲ್ಲಿ ಕರ್ನಾಟಕ ಹಾಗೂ ಜಮ್ಮು-ಕಾಶ್ಮೀರ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದು ಬ್ಯಾಟಿಂಗ್ ಮಾಡುತ್ತಿರುವ ಜಮ್ಮು-ಕಾಶ್ಮೀರ ತಂಡ ಇತ್ತೀಚಿನ ವರದಿ ಬಂದಾಗ ೧ ವಿಕೆಟ್ ನಷ್ಟಕ್ಕೆ ೧೩೦ ರನ್ ಗಳಿಸಿ ಆಡುತ್ತಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**